ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1798

ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 19-03-2021.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ 11 "ಬಿ" ಖಾತೆಗಳು ರಿಜಿಸ್ಟ್ರೇಷನ್ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, 11 'ಬಿ' ಖಾತೆಯ ಪರಭಾರೆ ನಡೆಸಲು ಸರ್ಕಾರ ಹಿಂಪಡೆಯಲು ಕಾರಣವೇನು; (ಸಂಪೂರ್ಣ ವಿವರ ನೀಡುವುದು)	ಬಂದಿಲ್ಲ. ಆದಾಗ್ಯೂ ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013(ಭಾಗ-6), ದಿನಾಂಕ:03-02-2014ರಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ವಿತರಿಸಿ ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಾಯಿಸಲು ತಿಳಿಸಲಾಗಿದೆ. ಅದರಂತೆ ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ 11ಬಿ ವಿತರಿಸುತ್ತಾರೆ. ಮುಂದುವರೆದು, ಉತ್ತರ ಕನ್ನಡ, ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸುವುದಕ್ಕೆ ವಿನಾಯಿತಿ ನೀಡಿ ನಮೂನೆ 11ಬಿ ಯನ್ನು ಕೈಬರಹದ ಮೂಲಕ ನೀಡಲು ಅವಕಾಶ ಕಲ್ಪಿಸಲಾಗಿದೆ.
(ಆ)	ಗ್ರಾಮ ಪಂಚಾಯತಿಗಳಲ್ಲಿ 11 'ಬಿ' ಖಾತೆ ಮಾಡಿಕೊಂಡು ಪರವಾನಗಿ ಪಡೆದುಕೊಂಡು ನಂತರ ಬ್ಯಾಂಕುಗಳು ಇಂತಹ ಖಾತೆಗಳಿಗೆ ಸಾಲ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ನ್ಯೂನತೆ ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)	ಬಂದಿದೆ. ನಮೂನೆ-11ಬಿ ನಲ್ಲಿನ ಕ್ರಮಬದ್ಧವಲ್ಲದ ಆಸ್ತಿಗಳಿಗೆ ಪ್ರಸ್ತುತ ಬ್ಯಾಂಕ್‌ಗಳು ಸಾಲ ನೀಡುತ್ತಿರುವುದಿಲ್ಲ.
(ಇ)	ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಗ್ರಾಮ ಪಂಚಾಯತಿಗಳಲ್ಲಿ ವೈಜ್ಞಾನಿಕ ಕಸ ವಿಲೇವಾರಿ ಘಟಕ ಮಂಜೂರಾಗಿದೆ: ಇದರಲ್ಲಿ ಕಾರ್ಯಾರಂಭ ಮಾಡಿರುವ ಘಟಕವೆಷ್ಟು; ಬಾಕಿ ಇರುವ ಘಟಕವನ್ನು ಯಾವಾಗ	ಮಂಡ್ಯ ಜಿಲ್ಲೆಯ 120 ಗ್ರಾಮ ಪಂಚಾಯತ್‌ಗಳಲ್ಲಿ ಕಸ ವಿಲೇವಾರಿ ಘಟಕ ಮಂಜೂರಾಗಿರುತ್ತದೆ. ಇದರಲ್ಲಿ 28 ಗ್ರಾಮ ಪಂಚಾಯಿತಿಗಳು ಕಾರ್ಯಾರಂಭ ಮಾಡಿರುತ್ತವೆ. ಉಳಿದ 92 ಗ್ರಾಮ ಪಂಚಾಯತ್‌ಗಳಲ್ಲಿ ತ್ಯಾಜ್ಯ ನಿರ್ವಹಣಾ ಘಟಕಗಳನ್ನು ಮಾರ್ಚ್, ಏಪ್ರಿಲ್, ಮೇ ಮತ್ತು ಜೂನ್ ಮಾಹೆಗಳಲ್ಲಿ ಹಂತ ಹಂತವಾಗಿ ಕಾರ್ಯಾರಂಭ ಮಾಡಿಸಲು ಕ್ರಮವಹಿಸಲಾಗಿದೆ. ತ್ಯಾಜ್ಯ ನಿರ್ವಹಣ ಘಟಕ ಪ್ರಾರಂಭಿಸಲು ತ್ಯಾಜ್ಯ ಸಂಗ್ರಹಣ

	ಪ್ರಾರಂಭ ಮಾಡಲಾಗುವುದು : ವಿಳಂಭಕ್ಕೆ ಕಾರಣವೇನು : (ತಾಲ್ಲೂಕುವಾರು, ಪಂಚಾಯತಿವಾರು ಸಂಪೂರ್ಣ ಮಾಹಿತಿ ನೀಡುವುದು)	ಕಟ್ಟಡ, ಕಸದ ಬುಟ್ಟಿಗಳು ಮತ್ತು ವಾಹನ ಅತ್ಯಾವಶ್ಯಕವಾಗಿದ್ದು, ಈ ಪೈಕಿ ವಾಹನಗಳ ಖರೀದಿ ಮಾಡಿಲ್ಲದ ಕಾರಣ ಗ್ರಾಮ ಪಂಚಾಯತ್‌ಗಳು ತ್ಯಾಜ್ಯ ನಿರ್ವಹಣಾ ಘಟಕ ಪ್ರಾರಂಭಿಸಲು ವಿಳಂಬವಾಗಿತ್ತು. ಪ್ರಸ್ತುತ ಜಿಲ್ಲಾ ಹಂತದಲ್ಲಿಯೇ ಇ-ಟೆಂಡರ್ ಪ್ರಕ್ರಿಯೆ ಮೂಲಕ ವಾಹನಗಳನ್ನು ಖರೀದಿಸಲು ಕ್ರಮವಹಿಸಲಾಗಿದ್ದು, ಕೂಡಲೇ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿಯೂ ಕಾರ್ಯಾರಂಭ ಮಾಡಲು ಕ್ರಮವಹಿಸಲಾಗುವುದು. ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು ವಿವರಗಳನ್ನು ಅನುಬಂಧ-1 ರಲ್ಲಿ ನೀಡಿದೆ.
(ಈ)	ಗ್ರಾಮ ಪಂಚಾಯತಿಗಳಲ್ಲಿ ವೈಜ್ಞಾನಿಕವಾಗಿ ತಯಾರಾಗುವ ಗೊಬ್ಬರವನ್ನು ವಿಲೇವಾರಿ ಮಾಡಲು ಸರ್ಕಾರ ನಿಗದಿಪಡಿಸಲಾಗಿರುವ ಮಾರ್ಗಸೂಚಿಗಳಾವುವು; ಈ ಯೋಜನೆಯನ್ನು ಜಿಲ್ಲೆಯ ಯಾವ ಯಾವ ಪಂಚಾಯತಿಗಳಲ್ಲಿ ಅಳವಡಿಸಿಕೊಳ್ಳಲಾಗಿದೆ? (ವಿವರ ನೀಡುವುದು)	ವೈಜ್ಞಾನಿಕವಾಗಿ ತಯಾರಾಗುವ ಗೊಬ್ಬರವನ್ನು ವಿಲೇವಾರಿ ಮಾಡುವ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ (ಘನ ತ್ಯಾಜ್ಯ ನಿರ್ವಹಣೆ) ಮಾದರಿ ಉಪವಿಧಿಗಳು, 2020ಅನ್ನು ಸಿದ್ದಪಡಿಸಿ ನೀಡಿದ್ದು, ಅದರಂತೆ ಕಾರ್ಯನಿರ್ವಹಿಸಲು ಎಲ್ಲಾ ಗ್ರಾಮ ಪಂಚಾಯತ್‌ಗಳಿಗೆ ಸೂಚಿಸಲಾಗಿದೆ. ಕರ್ನಾಟಕ ಪಂಚಾಯತ್ ರಾಜ್ (ಘನ ತ್ಯಾಜ್ಯ ನಿರ್ವಹಣೆ) ಮಾದರಿ ಉಪವಿಧಿಗಳು, 2020 ರ ಪ್ರತಿಯನ್ನು ಅನುಬಂಧ-2 ರಲ್ಲಿ ನೀಡಿದೆ. ಮಂಡ್ಯ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿಯೂ ಕರ್ನಾಟಕ ಪಂಚಾಯತ್ ರಾಜ್ (ಘನ ತ್ಯಾಜ್ಯ ನಿರ್ವಹಣೆ) ಮಾದರಿ ಉಪವಿಧಿಗಳು, 2020ರಲ್ಲಿ ತಿಳಿಸಿರುವಂತೆ ಹಂತ ಹಂತವಾಗಿ ತ್ಯಾಜ್ಯ ನಿರ್ವಹಣ ಘಟಕವನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿದೆ.

ಸಂ. ಗ್ರಾಅಪ 14**6** ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು